ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/366/ಅಉಗೌ/2017-18/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 6 .05.2018

ಇವರಿಗೆ,

ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ
ಪ್ರಾದೇಶಿಕ ಕಛೇರಿ
ಬೆಂಗಳೂರು, ಮೈಸೂರು, ಶಿವಮೊಗ್ಗ,
ಮಂಗಳೂರು, ಧಾರವಾಡ, ಕಲಬುರಗಿ.

ಮಾನ್ಯರೆ,

ವಿಷಯ: ದಿನಾಂಕ:15.07.2017 ರಿಂದ 28.07.2017ರ ವರೆಗೆ ಕರ್ತವ್ಯ ನಿರ್ವಹಿಸಿದ ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಸುವ ಬಗ್ಗೆ.

ಉಲ್ಲೇಖ:
1. ಅಧ್ಯಕ್ಷರು, ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ರಾಜ್ಯ ಸಮನ್ವಯ ಸಮಿತಿ ಧಾರವಾಡ ಘಟಕ ಇವರ ಮನವಿಯ ದಿನಾಂಕ:04.01.2018.
2. ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳ ಮನವಿಗಳು.

* * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:23.06.2017ರ ಈ ಕಛೇರಿಯ ಸುತ್ತೋಲೆಯನ್ವಯ ಕೆಲವು ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗಿದ್ದು ತದನಂತರ ಹೊರಡಿಸಲಾದ ದಿನಾಂಕ:31.07.2017ರ ಸುತ್ತೋಲೆಯಲ್ಲಿ ಜಾರಿಗೊಳಿಸಲಾದ ಮಾನದಂಡಗಳನ್ವಯ ಅರ್ಹರಾಗದೇ ಇರುವ ಅತಿಥಿ ಉಪನ್ಯಾಸಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿರುತ್ತದೆ. ಈ ರೀತಿ ಬಿಡುಗಡೆಗೊಳಿಸಲಾದ ಅತಿಥಿ ಉಪನ್ಯಾಸಕರುಗಳು ದಿನಾಂಕ:15.07.2017 ರಿಂದ 28.07.2017ರ ವರೆಗೆ ಕಾರ್ಯನಿರ್ವಹಿಸಿದ್ದ ಅವಧಿಗೆ ಗೌರವಧನವನ್ನು ಪಾವತಿಸುವಂತೆ ಕೋರಿ ಉಲ್ಲೇಖ-(1) ಮತ್ತು (2) ರಲ್ಲಿ ಮನವಿಗಳನ್ನು ಸಲ್ಲಿಸಲಾಗಿರುತ್ತದೆ.

2017-18ನೇ ಸಾಲಿನಲ್ಲಿ ಖಾಯಂ ಅಧ್ಯಾಪಕರಿಗೆ ಹಂಚಿಕೆಯಾಗಿ, ಉಳಿಕೆ ಲಭ್ಯವಿರುವ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ಈ ಕಛೇರಿಯ ಸುತ್ತೋಲೆ ಸಂ:ಕಾಶಿಇ/01/ಅಉಆ/2017-18/ನೇವಿ-1, ದಿ:23.06.2017ರಲ್ಲಿ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಅದರನ್ವಯ ಕೆಲವು ಕಾಲೇಜುಗಳಲ್ಲಿ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿರುತ್ತದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸರ್ಕಾರಿ ಪದವಿ ಕಾಲೇಜುಗಳಿಗೆ ವಿವಿಧ ವಿಷಯಗಳಲ್ಲಿ ಆಯ್ಕೆಯಾದ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಆದೇಶಗಳು ಸರ್ಕಾರದಿಂದ ಸ್ವೀಕೃತವಾಗುತ್ತಿದ್ದ ಹಿನ್ನೆಲೆಯಲ್ಲಿ ಖಾಯಂ ಉಪನ್ಯಾಸಕರಿಗೆ ಹಂಚಿಕೆಯಾಗಿ ಉಳಿದ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಬೇಕಾಗಿದ್ದರಿಂದ ಈಗಾಗಲೇ ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರನ್ನು ಹೊರತುಪಡಿಸಿ, ಹೊಸದಾಗಿ ಆಯ್ಕೆ ಪ್ರಕ್ರಿಯೆಯನ್ನು ತಡೆ ಹಿಡಿಯುವಂತೆ ದಿ:18.07.2017ರ ಸುತ್ತೋಲೆ ಸಂಖ್ಯೆ:ಕಾಶಿಇ/01/ಅಉಆ/2017-18/ನೇವಿ-1 ರಲ್ಲಿ ಸೂಚಿಸಲಾಗಿತ್ತು.

10/5/18 ರವಾನಿಸಲಾಗಿದೆ.

ತದನಂತರ 2017-18ನೇ ಸಾಲಿನಲ್ಲಿ ಖಾಯಂ ಅಧ್ಯಾಪಕರಿಗೆ ಹಂಚಿಕೆಯಾಗಿ, ಉಳಿಕೆ ಲಭ್ಯವಿರುವ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ದಿನಾಂಕ:31.07.2017ರ ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/01/ಅಉಅ/2017-18/ ನೇವಿ-1 ರಲ್ಲಿ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಯಿತು.

ದಿನಾಂಕ:23.06.2017ರ ಸುತ್ತೋಲೆಯನ್ವಯ ಕೆಲವು ಕಾಲೇಜುಗಳಲ್ಲಿ ಆಯ್ಕೆ ಮಾಡಿಕೊಳ್ಳಲಾಗಿದ್ದ ಅತಿಥಿ ಉಪನ್ಯಾಸಕರುಗಳು ದಿನಾಂಕ:31.07.2017ರ ಸುತ್ತೋಲೆಯಲ್ಲಿ ಜಾರಿಗೊಳಿಸಲಾದ ಮಾನದಂಡಗಳನ್ವಯ ಅರ್ಹರಾಗದೇ ಇದ್ದುದರಿಂದ, ಸದರಿಯವರುಗಳನ್ನು ಅತಿಥಿ ಉಪನ್ಯಾಸಕರ ಸೇವೆಯಿಂದ ಬಿಡುಗಡೆಗೊಳಿಸಲಾಗಿರುತ್ತದೆ. ಈ ರೀತಿ ಬಿಡುಗಡೆ ಮಾಡಲಾದ ಅತಿಥಿ ಉಪನ್ಯಾಸಕರುಗಳು ದಿನಾಂಕ:15.07.2017 ರಿಂದ 28.07.2017ರ ವರೆಗೆ ಕಾರ್ಯನಿರ್ವಹಿಸಿದ್ದ ಅವಧಿಗೆ ಗೌರವಧನವನ್ನು ಪಾವತಿಸಲು ನಿಯಾಮನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಹಾಗೂ ಈ ಸಂಬಂಧ ಕೈಗೊಂಡ ಕ್ರಮದ ಕುರಿತು ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ.

**(ಟಿಪ್ಪಣಿ, ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ತಮ್ಮ ವಿಶ್ವಾಸಿ**

Shilpa

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಪ್ರತಿಗಳು:-**

1. ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮುಂದಿನ ಅಗತ್ಯ ಕ್ರಮಕ್ಕಾಗಿ.
2. ವ್ಯವಸ್ಥಾಪಕರು, ಆಯವ್ಯಯ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ , ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು- ಈ ಪತ್ರವನ್ನು ಇಲಾಖೆಯ ವೆಬ್‌ಸೈಟ್‌ಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
4. ಕಛೇರಿ ಪ್ರತಿ.

16/8/18

O/C